# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 108 |
| ಸದಸ್ಯರ ಹೆಸರು | : | ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13-09-2021 |
| ಉತ್ತರಿಸುವ ಸಚಿವರು | : | ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರೌಢಶಾಲಾ ಸಹ ಶಿಕ್ಷಕರಿಂದ ಪದವಿ ಪೂರ್ವ ಉಪನ್ಯಾಸಕರಿಗೆ ಬಡ್ತಿ ನೀಡಿ ಎಷ್ಟು ವರ್ಷಗಳಾಗಿದೆ; | 2011ರಲ್ಲಿ ಅರ್ಹ 487 ಮತ್ತು 697 ಪ್ರೌಢ ಶಾಲಾ ಸಹ ಶಿಕ್ಷಕರನ್ನು ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲಾಗಿದೆ. |
| ಆ) | ಈ ಸಂಬಂಧ ಜೇಷ್ಠತಾ ಪಟ್ಟಿ ತಯಾರಿಸಲಾಗಿದೆಯೇ; | ಸರ್ಕಾರಿ ಪ್ರೌಢ ಶಾಲೆಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಸ್ನಾತಕೋತ್ತರ ಪದವಿಯನ್ನು ಹೊಂದಿರುವ ಸಹಶಿಕ್ಷಕರ ಜೇಷ್ಠತಾ ಪಟ್ಟಿಯನ್ನು ಸಿದ್ಧಪಡಿಸಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರು ಪದವಿ ಪೂರ್ವ ಶಿಕ್ಷಣ ಇಲಾಖೆಗೆ ದಿನಾಂಕ:23-04-2021ರಂದು ಸಲ್ಲಿಸಿರುತ್ತಾರೆ. |
| ಇ) | ಇಷ್ಟು ವರ್ಷಗಳಿಂದ ಪದೋನ್ನತಿ ನೀಡದಿರಲು ಸರ್ಕಾರಕ್ಕಿರುವ ಕಾರಣಗಳೇನು; | ಸರ್ಕಾರದ ಅಧಿಸೂಚನೆ ಸಂಖ್ಯೆ:ಡಿಪಿಎಆರ್ 71 ಎಸ್‌ಆರ್‌ಇ 94 ದಿನಾಂಕ:27/05/1998ರಲ್ಲಿ ಶೇಕಡ 50ರಷ್ಟು ಉಪನ್ಯಾಸಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 50ರಷ್ಟು ಪ್ರೌಢ ಶಾಲಾ ಸಹ ಶಿಕ್ಷಕರ ವೃಂದದಿಂದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿತ್ತು. ಅದರಂತೆ, 2011ರಲ್ಲಿ ಅರ್ಹ 487 ಮತ್ತು 697 ಪ್ರೌಢಶಾಲಾ ಸಹ ಶಿಕ್ಷಕರನ್ನು ಉಪನ್ಯಾಸಕರ ವೃಂದಕ್ಕೆ ಬಡ್ತಿ ನೀಡಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 35 ಡಿಜಿಡಿ 2009 ದಿನಾಂಕ:15/05/2014 ರಂದು ವೃಂದ ಮತ್ತು ನೇಮಕಾತಿ ನಿಯಮಕ್ಕೆ ಪರಿಷ್ಕರಣೆ ಮಾಡಿ ಶೇಕಡ 75ರಷ್ಟು ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಮತ್ತು ಶೇಕಡ 25ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿದೆ.<br><br>ಪ್ರೌಢ ಶಾಲಾ ಸಹ ಶಿಕ್ಷಕರಿಗೆ ಉಪನ್ಯಾಸಕರ ವೃಂದಕ್ಕೆ ಬಡ್ತಿ ಕೋಟಾದಲ್ಲಿ ಶೇಕಡ 50ರಷ್ಟು |

| | | |
|---|---|---|
| | | ಪದೋನ್ನತಿ ನೀಡಿದ್ದರಿಂದ ಈಗಾಗಲೇ 395 ಹುದ್ದೆಗಳು ಹೆಚ್ಚುವರಿಯಾಗಿದ್ದು, ಶೇಕಡ 75:25ರ ಬಡ್ತಿ ಕೋಟಾದ ಹುದ್ದೆಗಳು ಖಾಲಿ ಇಲ್ಲದಿರುವುದರಿಂದ ಪ್ರಸ್ತುತ ಬಡ್ತಿ ನೀಡಲು ಅವಕಾಶವಿರುವುದಿಲ್ಲ. |
| ಈ) | ಈ ಪದೋನ್ನತಿ ಪ್ರಕ್ರಿಯೆ ಯಾವಾಗ ಪ್ರಾರಂಭಿಸಲಾಗುವುದು? | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಬಡ್ತಿ ಕೋಟಾದಡಿ ಕಾರ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಹುದ್ದೆಗಳು ವಯೋ ನಿವೃತ್ತಿ, ನಿಧನ, ರಾಜೀನಾಮೆ ಹಾಗೂ ಇತರೆ ಕಾರಣಗಳಿಂದ ತೆರವಾದಾಗ ನಿಯಮಾನುಸಾರ ಪ್ರೌಢ ಶಾಲೆಗಳ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡಲು ಕ್ರಮ ಕೈಗೊಳ್ಳಲಾಗುವುದು. |

**ಸಂಖ್ಯೆ: ಇಪಿ 124 ಡಿಜಿಡಬ್ಲ್ಯೂ 2021**

(ಬಿ.ಸಿ. ನಾಗೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು.